# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 406**

**ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ ರಾಥೋಡ್ (ನಾಮ ನಿರ್ದೇಶನ ಹೊಂದಿದವರು)**

**ಉತ್ತರಿಸುವ ದಿನಾಂಕ : 19-02-2024**

**ಉತ್ತರಿಸುವವರು : ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಾಡು ಪ್ರಾಣಿಗಳಿಂದ ಪದೇ ಪದೇ ನಾಗರೀಕರ ಮೇಲೆ ತೊಂದರೆಯಾಗುತ್ತಿರುವುದನ್ನು ತಪ್ಪಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು; | ರಾಜ್ಯದಲ್ಲಿ ಕಾಡು ಪ್ರಾಣಿಗಳಿಂದ ಪದೇ ಪದೇ ನಾಗರೀಕರ ಮೇಲೆ ತೊಂದರೆಯಾಗುತ್ತಿರುವುದನ್ನು ತಪ್ಪಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ:-<br><br>1.ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ ನಿರ್ಮಾಣ/ನಿರ್ವಹಣೆ, ಆನೆತಡೆ ಕಂದಕ ನಿರ್ಮಾಣ/ನಿರ್ವಹಣೆ ಮಾಡಲಾಗಿದ್ದು ಮತ್ತು ರೈಲ್ವೆ ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ.<br><br>2.ಸರ್ಕಾರದ ಆದೇಶ ಸಂಖ್ಯೆ: ಅಪಜೀ 170 ಎಫ್‌ಡಬ್ಲ್ಯೂಎಲ್ 2022, ದಿನಾಂಕ:21.11.2022 ರಲ್ಲಿ ಹಾಸನ, ಚಿಕ್ಕಮಗಳೂರು, ಮೈಸೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಅಪಜೀ 311 ಎಫ್‌ಇಜಿ 2022, ದಿನಾಂಕ:01.02.2023ರಲ್ಲಿ ಚಾಮರಾಜನಗರ ಜಿಲ್ಲೆ ಮತ್ತು ಸರ್ಕಾರದ ಆದೇಶ ಸಂಖ್ಯೆ: ಅಪಜೀ 170 ಎಫ್‌ಡಬ್ಲ್ಯೂಎಲ್ 2022, ದಿನಾಂಕ:30.06.2023ರಲ್ಲಿ ರಾಮನಗರ, ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ ಹಾಗೂ ಬೆಂಗಳೂರು ಜಿಲ್ಲೆಗಳಲ್ಲಿ ಕಾಡಾನೆ ಹಾವಳಿ ಹೆಚ್ಚಾಗಿರುವ ಭಾಗಗಳಲ್ಲಿ ಕಾಡಾನೆ ಹಾವಳಿಯನ್ನು ತಡೆಗಟ್ಟಲು ಪ್ರತಿ ಜಿಲ್ಲೆಗೊಂದರಂತೆ ಅಧಿಕಾರಿ / ಸಿಬ್ಬಂದಿಗಳನ್ನೊಳಗೊಂಡ ಜಿಲ್ಲಾ ಆನೆ ಕಾರ್ಯಪಡೆ (Elephant Task Force)ಯನ್ನು ರಚಿಸಲಾಗಿದೆ.<br><br>3.ಸರ್ಕಾರದ ಆದೇಶ ಸಂಖ್ಯೆ: ಅಪಜೀ 311 ಎಫ್‌ಇಜಿ 2022 ದಿನಾಂಕ: 31.01.2023ರಲ್ಲಿ ಮೈಸೂರು ವೃತ್ತದ ಮೈಸೂರು / ನಂಜನಗೂಡು / ಹೆಚ್.ಡಿ.ಕೋಟೆ / ಸರಗೂರು / ಟಿ.ನರಸೀಪುರ / ಮಂಡ್ಯ / ಪಾಂಡವಪುರ / ನಾಗಮಂಗಲ ವ್ಯಾಪ್ತಿಯಲ್ಲಿ ಚಿರತೆ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಚಿರತೆ ಹಾವಳಿ ನಿಭಾಯಿಸುವ ನಿಟ್ಟಿನಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ, ವನ್ಯಜೀವಿ ವಿಭಾಗ, ಮೈಸೂರು |

| | | |
|---|---|---|
| | | ಇವರ ನೇತೃತ್ವದಲ್ಲಿ ಚಿರತೆ ಕಾರ್ಯಪಡೆ (Leopard Task Force) ರಚಿಸಲಾಗಿದೆ. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು) ಬೆಂಗಳೂರು ರವರ ಅಧಿಕೃತ ಜ್ಞಾಪನಾ ಪತ್ರ ದಿನಾಂಕ: 24.11.2023ರಲ್ಲಿ ಬೆಂಗಳೂರು ಜಿಲ್ಲೆಯ ಕಗ್ಗಲೀಪುರ / ಆನೆಕಲ್ಲು / ಯಲಹಂಕ / ಹೊಸಕೋಟೆ / ಕೆ.ಆರ್.ಪುರಂ ವಲಯಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಚಿರತೆ ಹಾವಳಿ ನಿಭಾಯಿಸುವ ನಿಟ್ಟಿನಲ್ಲಿ ಚಿರತೆ ಕಾರ್ಯಪಡೆಯನ್ನು ರಚಿಸಲಾಗಿದೆ.<br>4.ಆನೆ ಕಾರ್ಯಪಡೆ (ETF) ಮತ್ತು ಚಿರತೆ ಕಾರ್ಯಪಡೆ (LTF) ಗಳಿಗೆ ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಿದ್ದು, ನಿಯಂತ್ರಣ ಕೊಠಡಿಗೆ ಬರುವ ಕರೆಗಳಿಗೆ ಸ್ಪಂದಿಸಿ ಕೂಡಲೇ ಕ್ರಮವಹಿಸಲಾಗುತ್ತಿದೆ.<br>5.ಚಿರತೆ / ಹುಲಿ ಹಾವಳಿ ಹೆಚ್ಚಾಗಿರುವ ಸೂಕ್ಷ್ಮ ಪ್ರದೇಶಗಳಲ್ಲಿ ಬೋನುಗಳನ್ನು ಇರಿಸಿ ಸೆರೆ ಹಿಡಿದು, ಸೂಕ್ತ ಆವಾಸಸ್ಥಾನಕ್ಕೆ ಸ್ಥಳಾಂತರಿಸಲು ಕ್ರಮವಹಿಸಲಾಗುತ್ತಿದೆ.<br>6.ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಶ್ಚೇತನಗೊಳಿಸಿ ವನ್ಯಪ್ರಾಣಿಗಳ ಆವಾಸ ಸ್ಥಾನವನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ. ಇದರಿಂದ ಕಾಡಾನೆ ಹಾಗೂ ಇತರೆ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗುತ್ತಿದೆ.<br>7.ಅರಣ್ಯ ಪ್ರದೇಶಗಳಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು ಹೆಚ್ಚಿನ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳಿಂದಾಗಿ ಹುಲ್ಲಿನ ಬೆಳವಣಿಗೆಗೆ ತೀವ್ರ ಅಡಚಣೆಯಾಗಿ ಅರಣ್ಯದಲ್ಲಿ ಹುಲ್ಲಿನ ಲಭ್ಯತೆ ಗಣನೀಯವಾಗಿ ಕಡಿಮೆಯಾಗಿರುವುದರಿಂದ ಹುಲ್ಲು ಬೆಳೆಯುವ ಪ್ರದೇಶಗಳಲ್ಲಿ ಬೆಳೆದಿರುವ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅನುವು ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.<br>8.ಕಾಡಾನೆ ಹಾವಳಿ ತುರ್ತು ನಿರ್ವಹಣೆಗಾಗಿ ಕ್ಷಿಪ್ರ ಕಾರ್ಯಪಡೆ ತಂಡಗಳನ್ನು (RRT) ರಚಿಸಿ ನಿರ್ವಹಿಸಲಾಗುತ್ತಿದೆ.<br>9.ಕಾಡಾನೆ ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ ಕಾಡಾನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ.<br>10. ನಿಸ್ತಂತು ಜಾಲದ ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ.<br>11. ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ. |

12. ಕಾಡಾನೆ ಗುಂಪಿನಲ್ಲಿದ್ದ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನ-ವಲನಗಳ ಬಗ್ಗೆ ಎಸ್.ಎಂ.ಎಸ್. ಹಾಗೂ ವಾಟ್ಸಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣಹಾನಿ ಹಾಗೂ ಮಾನವ ಗಾಯ ತಪ್ಪಿಸಲು ಕ್ರಮ ವಹಿಸಲಾಗುತ್ತಿದೆ.

13. ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆಹಿಡಿದು ಆಗಿಂದಾಗ್ಗೆ ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ.

14. ಕಾಡಾನೆಗಳ ಹಾವಳಿ ಹೆಚ್ಚಾಗಿರುವ ಪ್ರದೇಶದಲ್ಲಿ ಜನ ಸಂಪರ್ಕ ಸಭೆಯನ್ನು ಕರೆದು ಜನರಲ್ಲಿ ಅರಿವು ಮೂಡಿಸುವುದು.

15. ರೈತರಿಗೆ ಸಬ್ಸಿಡಿ ದರದಲ್ಲಿ ಸೋಲಾರ್ ಬೇಲಿ ನಿರ್ಮಾಣ ಮಾಡಲು ಉತ್ತೇಜನ ನೀಡಲಾಗುತ್ತಿದೆ ಹಾಗೂ ಅರಣ್ಯದ ಅಂಚಿನಲ್ಲಿ ಬರುವ ಖಾಸಗಿ ಜಮೀನುಗಳ ಸುತ್ತ ಸರ್ಕಾರದ ವತಿಯಿಂದ ದೊರಕುವ ಶೇ. 50 ಸಬ್ಸಿಡಿಯನ್ನು ಬಳಸಿಕೊಂಡು ಸೌರಶಕ್ತಿ ಬೇಲಿಯನ್ನು ನಿರ್ಮಿಸಲಾಗುತ್ತಿದೆ.

16. ಸರ್ಕಾರದ ಆದೇಶ ಸಂಖ್ಯೆ: ಅಪಜೀ 96 ಎಫ್.ಡಬ್ಲ್ಯೂ.ಎಲ್. 2016 ದಿನಾಂಕ: 01.10.2016 ರಲ್ಲಿ ಮಾನವ ಪ್ರಾಣಕ್ಕೆ ಅಥವಾ ಸ್ವತ್ತಿಗೆ ಅಪಾಯಕಾರಿಯಾಗಿರುವ ಹಾಗೂ ಬೆಳೆನಾಶ ಮಾಡುವ ಕಾಡು ಹಂದಿಗಳನ್ನು ಕೊಲ್ಲಲು ಅನುಮತಿ ನೀಡುವ ಬಗ್ಗೆ ಆದೇಶಿಸಲಾಗಿದೆ.

17. ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಮಾನವ ಪ್ರಾಣಹಾನಿ, ಶಾಶ್ವತ ಅಂಗವಿಕಲತೆ, ಭಾಗಶಃ ಅಂಗವಿಕಲತೆ, ಗಾಯಗೊಂಡವರಿಗೆ ಆಸ್ತಿಪಾಸ್ತಿ ನಷ್ಟ ಪ್ರಕರಣಗಳಲ್ಲಿ ನೀಡುತ್ತಿರುವ ಪರಿಹಾರ ಧನ ಮತ್ತು ಮಾಸಾಶನ ಧನವನ್ನು ಸರ್ಕಾರದ ಆದೇಶ ಸಂಖ್ಯೆ: ಅಪಜೀ 114 ಎಫ್.ಡಬ್ಲ್ಯೂ.ಎಲ್ 2022, ಬೆಂಗಳೂರು ದಿನಾಂಕ:15-12-2022ರಲ್ಲಿ ಪರಿಷ್ಕರಿಸಿ ದುಪ್ಪಟ್ಟು ಮಾಡಿ ಆದೇಶಿಸಲಾಗಿದೆ.

18. ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಬೆಳೆನಾಶ ಪ್ರಕರಣಗಳಿಗೆ ಸಂಬಂಧಿಸಿದಂತೆ ವಿವಿಧ ಬೆಳೆಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಅಪಜೀ 130 ಎಫ್.ಡಬ್ಲ್ಯೂ.ಎಲ್. 2016 ದಿನಾಂಕ:19.09.2016 ರನ್ವಯ ನೀಡಲಾಗುತ್ತಿದ್ದು, ಪರಿಹಾರ ಮೊತ್ತವನ್ನು ಪ್ರಸ್ತುತ ದಿನಾಂಕ:18.01.2023 ರ ಆದೇಶದಲ್ಲಿ ದುಪ್ಪಟ್ಟು ಮಾಡಿ ಆದೇಶಿಸಲಾಗಿದೆ.

19. ಸರ್ಕಾರದ ಆದೇಶ ಸಂಖ್ಯೆ:ಅಪಜೀ 171 ಎಫ್.ಡಬ್ಲ್ಯೂ.ಎಲ್. 2022 ದಿನಾಂಕ:16.02.2023ರಲ್ಲಿ ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಸಾಕು

| | | |
|---|---|---|
| | | ಪ್ರಾಣಿಗಳ ಪ್ರಾಣ ಹಾನಿ ಪ್ರಕರಣಗಳಿಗೆ ರಾಜ್ಯ ವಿಪತ್ತು ನಿರ್ವಹಣಾ ನಿಧಿ (SDRF) ರಲ್ಲಿನ ಚಾಲ್ತಿಯಲ್ಲಿರುವ ಪರಿಷ್ಕೃತ ದರಗಳಂತೆ ಪಾವತಿಸಲು ಆದೇಶಿಸಲಾಗಿದೆ. |
| ಆ) | ತಾತ್ಕಾಲಿಕ ಕ್ರಮಗಳನ್ನು ಕೈಗೊಳ್ಳುವುದನ್ನು ಬಿಟ್ಟು ಶಾಶ್ವತ ತಡೆ ಕ್ರಮಗಳನ್ನು ಕೈಗೊಳ್ಳಲು ಸರ್ಕಾರ ನಿರ್ಧರಿಸಿದೆಯೇ: | ರಾಜ್ಯದಲ್ಲಿ ಮಾನವ-ಆನೆ ಸಂಘರ್ಷ ಹೆಚ್ಚಾಗಿರುವ ಪ್ರದೇಶಗಳಲ್ಲಿ ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ನಿಯಂತ್ರಿಸಲು ಉಪಯೋಗಿಸಿದ ರೈಲ್ವೆ ಹಳಿಗಳನ್ನು ಉಪಯೋಗಿಸಿಕೊಂಡು ರೈಲ್ವೆ ಬ್ಯಾರಿಕೇಡ್ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದ್ದು, ಒಟ್ಟು 312.919 ಕಿ.ಮೀ ರೈಲ್ವೆ ಬ್ಯಾರಿಕೇಡ್ ಕಾಮಗಾರಿ ಕೈಗೊಂಡಿದ್ದು, ಪ್ರಸಕ್ತ ಸಾಲಿನಲ್ಲಿ 120.788 ಕಿ.ಮೀ ರೈಲ್ವೆ ಬ್ಯಾರಿಕೇಡ್ ಕಾಮಗಾರಿ ಕೈಗೊಳ್ಳಲು ಗುರಿ ನಿಗಧಿಪಡಿಸಲಾಗಿದೆ.<br><br>ವನ್ಯಪ್ರಾಣಿಗಳ ಹಾವಳಿಯಿಂದ ನಿಯಂತ್ರಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>1. ವನ್ಯಪ್ರಾಣಿಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ ನಿರ್ಮಾಣ/ನಿರ್ವಹಣೆ, ಆನೆತಡೆ ಕಂದಕ ನಿರ್ಮಾಣ/ನಿರ್ವಹಣೆ ಮಾಡಲಾಗುತ್ತಿದೆ. ಅಲ್ಲದೇ ಸೂಕ್ಷ ಪ್ರದೇಶಗಳಲ್ಲಿ ಟೆಂಟಿಕಲ್ ಸೋಲಾರ್ ಫೆನ್ಸಿಂಗ, ಸ್ಟೀಲ್ ರೋಪ್ ಬ್ಯಾರಿಕೇಡ್, ಡಬಲ್ ಸೋಲಾರ್ ಫೆನ್ಸಿಂಗ, ಆನೆತಡೆ ಕಂದಕ ಹಾಗೂ ಸೋಲಾರ್ ಫೆನ್ಸಿಂಗ ಜೊತೆಯಾಗಿ ನಿರ್ಮಿಸಲು ಕ್ರಮ ವಹಿಸಲಾಗುತ್ತಿದೆ.<br>2. ರಾಜ್ಯದಲ್ಲಿ ಮಾನವ-ಆನೆ ಸಂಘರ್ಷ ಹೆಚ್ಚಾಗಿರುವ ಪ್ರದೇಶಗಳಲ್ಲಿ ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ನಿಯಂತ್ರಿಸಲು ಉಪಯೋಗಿಸಿದ ರೈಲ್ವೆ ಹಳಿಗಳನ್ನು ಉಪಯೋಗಿಸಿಕೊಂಡು ರೈಲ್ವೆ ಬ್ಯಾರಿಕೇಡ್ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದ್ದು, ಒಟ್ಟು 312.919 ಕಿ.ಮೀ ರೈಲ್ವೆ ಬ್ಯಾರಿಕೇಡ್ ಕಾಮಗಾರಿ ಕೈಗೊಂಡಿದ್ದು, ಪ್ರಸಕ್ತ ಸಾಲಿನಲ್ಲಿ (2023-24 ನೇ ಸಾಲಿನಲ್ಲಿ) 120.788 ಕಿ.ಮೀ ರೈಲ್ವೆ ಬ್ಯಾರಿಕೇಡ್ ಕಾಮಗಾರಿ ಕೈಗೊಳ್ಳಲು ಗುರಿ ನಿಗಧಿಪಡಿಸಲಾಗಿದೆ.<br>3. ಸರ್ಕಾರವು ದಿನಾಂಕ:21.11.2022 ರ ಆದೇಶದಲ್ಲಿ ಹಾಸನ, ಚಿಕ್ಕಮಗಳೂರು, ಮೈಸೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಹಾಗೂ ದಿನಾಂಕ:01.02.2023ರ ಆದೇಶದಲ್ಲಿ ಚಾಮರಾಜನಗರ ಜಿಲ್ಲೆ ಮತ್ತು ದಿನಾಂಕ:30.06.2023ರ ಆದೇಶದಲ್ಲಿ ರಾಮನಗರ ಹಾಗೂ ಬೆಂಗಳೂರು ಜಿಲ್ಲೆಗಳಲ್ಲಿ ಕಾಡಾನೆ ಹಾವಳಿ ಹೆಚ್ಚಾಗಿರುವ ಭಾಗಗಳಲ್ಲಿ ಕಾಡಾನೆ ಹಾವಳಿಯನ್ನು ತಡೆಗಟ್ಟಲು ಪ್ರತಿ ಜಿಲ್ಲೆಗೊಂದರಂತೆ ಅಧಿಕಾರಿ / ಸಿಬ್ಬಂದಿಗಳನ್ನೊಳಗೊಂಡ ಜಿಲ್ಲಾ ಆನೆ ಕಾರ್ಯಪಡೆ (Elephant Task Force) ನ್ನು ರಚಿಸಲಾಗಿರುತ್ತದೆ. |
| ಇ) | ನಿರ್ಧರಿಸಿದ್ದಲ್ಲಿ, ಯಾವ ಕಾಲಮಿತಿಯೊಳಗಾಗಿ ಯಾವ ರೀತಿಯ ಶಾಶ್ವತ ಕ್ರಮಗಳನ್ನು ಕೈಗೊಳ್ಳಲಾಗಿದೆ? | |

| | | |
| --- | --- | --- |
| | | 4. ಸರ್ಕಾರವು ದಿನಾಂಕ: 31.01.2023ರ ಆದೇಶದಲ್ಲಿ ಮೈಸೂರು ವೃತ್ತದ ಮೈಸೂರು / ನಂಜನಗೂಡು / ಹೆಚ್.ಡಿ.ಕೋಟೆ / ಸರಗೂರು / ಟಿ.ನರಸೀಪುರ / ಮಂಡ್ಯ / ಪಾಂಡವಪುರ / ನಾಗಮಂಗಲ ವ್ಯಾಪ್ತಿಯಲ್ಲಿ ಚಿರತೆ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಚಿರತೆ ಹಾವಳಿ ನಿಭಾಯಿಸುವ ನಿಟ್ಟಿನಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ, ವನ್ಯಜೀವಿ ವಿಭಾಗ, ಮೈಸೂರು ಇವರ ನೇತೃತ್ವದಲ್ಲಿ ಚಿರತೆ ಕಾರ್ಯಪಡೆ (Leopard Task Force) ರಚಿಸಲಾಗಿದೆ. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು) ಬೆಂಗಳೂರು ರವರ ಅಧಿಕೃತ ಜ್ಞಾಪನಾ ಪತ್ರ ದಿನಾಂಕ: 24.11.2023ರಲ್ಲಿ ಬೆಂಗಳೂರು ಜಿಲ್ಲೆಯ ಕಗ್ಗಲೀಪುರ / ಆನೇಕಲ್ಲು / ಯಲಹಂಕ / ಹೊಸಕೋಟೆ / ಕೆ.ಆರ್.ಪುರಂ ವಲಯಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಚಿರತೆ ಹಾವಳಿ ನಿಭಾಯಿಸುವ ನಿಟ್ಟಿನಲ್ಲಿ ಚಿರತೆ ಕಾರ್ಯಪಡೆಯನ್ನು ರಚಿಸಲಾಗಿದೆ.<br>5. ಆನೆ ಕಾರ್ಯಪಡೆ (ETF) ಮತ್ತು ಚಿರತೆ ಕಾರ್ಯಪಡೆ (LTF) ಗಳಿಗೆ ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಿದ್ದು, ನಿಯಂತ್ರಣ ಕೊಠಡಿಗೆ ಬರುವ ಕರೆಗಳಿಗೆ ಸ್ಪಂದಿಸಿ ಕೂಡಲೇ ಕ್ರಮವಹಿಸಲಾಗುತ್ತಿದೆ.<br>6. ಕಾಡಾನೆ ಗುಂಪಿನಲ್ಲಿದ್ದ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನ-ವಲನಗಳ ಬಗ್ಗೆ ಎಸ್.ಎಂ.ಎಸ್. ಹಾಗೂ ವಾಟ್ಸಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣಹಾನಿ ಹಾಗೂ ಮಾನವ ಗಾಯ ತಪ್ಪಿಸಲು ಕ್ರಮ ವಹಿಸಲಾಗುತ್ತಿದೆ.<br>7. ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆಹಿಡಿದು ಆಗ್ಗಿಂದಾಗ್ಗೆ ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ.<br>8. ಚಿರತೆ / ಹುಲಿ ಹಾವಳಿ ಹೆಚ್ಚಾಗಿರುವ ಸೂಕ್ಷ್ಮ ಪ್ರದೇಶಗಳಲ್ಲಿ ಬೋನುಗಳನ್ನು ಇರಿಸಿ ಸೆರೆ ಹಿಡಿದು, ಸೂಕ್ತ ಆವಾಸಸ್ಥಾನಕ್ಕೆ ಸ್ಥಳಾಂತರಿಸಲು ಕ್ರಮವಹಿಸಲಾಗುತ್ತಿದೆ.<br>9. ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಶ್ಚೇತನ ಗೊಳಿಸಿ ವನ್ಯಪ್ರಾಣಿಗಳ ಆವಾಸ ಸ್ಥಾನವನ್ನು ಅಭಿವೃದ್ಧಿ ಗೊಳಿಸಲಾಗುತ್ತಿದೆ. ಇದರಿಂದ ಕಾಡಾನೆ ಹಾಗೂ ಇತರೆ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗುತ್ತಿದೆ.<br>10. ಅರಣ್ಯ ಪ್ರದೇಶಗಳಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು ಹೆಚ್ಚಿನ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು |

| | | |
|---|---|---|
| | | ಯುಪಟೋರಿಯಂ ಕಳೆಗಳಿಂದಾಗಿ ಹುಲ್ಲಿನ ಬೆಳವಣಿಗೆಗೆ ತೀವ್ರ ಅಡಚಣೆಯಾಗಿ ಅರಣ್ಯದಲ್ಲಿ ಹುಲ್ಲಿನ ಲಭ್ಯತೆ ಗಣನೀಯವಾಗಿ ಕಡಿಮೆಯಾಗಿರುವುದರಿಂದ ಹುಲ್ಲು ಬೆಳೆಯುವ ಪ್ರದೇಶಗಳಲ್ಲಿ ಬೆಳೆದಿರುವ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅನುವು ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.<br>11. ಕಾಡಾನೆ ಹಾವಳಿ ತುರ್ತು ನಿರ್ವಹಣೆಗಾಗಿ ಕ್ಷಿಪ್ರ ಕಾರ್ಯಪಡೆ ತಂಡಗಳನ್ನು (RRT) ರಚಿಸಿ ನಿರ್ವಹಿಸಲಾಗುತ್ತಿದೆ.<br>12. ಕಾಡಾನೆ ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ ಕಾಡಾನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ.<br>13. ನಿಸ್ತಂತು ಜಾಲದ (Wireless) ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ.<br>14. ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ.<br>15. ಕಾಡಾನೆಗಳ ಹಾವಳಿ ಹೆಚ್ಚಾಗಿರುವ ಪ್ರದೇಶದಲ್ಲಿ ಜನ ಸಂಪರ್ಕ ಸಭೆಯನ್ನು ಕರೆದು ಜನರಲ್ಲಿ ಅರಿವು ಮೂಡಿಸುವುದು.<br>16. ರೈತರಿಗೆ ಸಬ್ಸಿಡಿ ದರದಲ್ಲಿ ಸೋಲಾರ್ ಬೇಲಿ ನಿರ್ಮಾಣ ಮಾಡಲು ಉತ್ತೇಜನ ನೀಡಲಾಗುತ್ತಿದೆ ಹಾಗೂ ಅರಣ್ಯದ ಅಂಚಿನಲ್ಲಿ ಬರುವ ಖಾಸಗಿ ಜಮೀನುಗಳ ಸುತ್ತಾ ಸರಕಾರದ ವತಿಯಿಂದ ದೊರಕುವ ಶೇ. 50 ಸಬ್ಸಿಡಿಯನ್ನು ಬಳಸಿಕೊಂಡು ಸೌರಶಕ್ತಿ ಬೇಲಿಯನ್ನು ನಿರ್ಮಿಸಲಾಗುತ್ತಿದೆ.<br>17. ಸರ್ಕಾರದ ಆದೇಶ ಸಂಖ್ಯೆ: ಅಪಜೀ 96 ಎಫ್.ಡಬ್ಲ್ಯು.ಎಲ್. 2016 ದಿನಾಂಕ: 01.10.2016 ರಲ್ಲಿ ಮಾನವ ಪ್ರಾಣಕ್ಕೆ ಅಥವಾ ಸ್ವತ್ತಿಗೆ ಅಪಾಯಕಾರಿಯಾಗಿರುವ ಹಾಗೂ ಬೆಳೆನಾಶ ಮಾಡುವ ಕಾಡು ಹಂದಿಗಳನ್ನು ಕೊಲ್ಲಲು ಅನುಮತಿ ನೀಡುವ ಬಗ್ಗೆ ಆದೇಶಿಸಲಾಗಿದೆ.<br>18. ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಮಾನವ ಪ್ರಾಣಹಾನಿ, ಶಾಶ್ವತ ಅಂಗವಿಕಲತೆ, ಭಾಗಶಃ ಅಂಗವಿಕಲತೆ, ಗಾಯಗೊಂಡವರಿಗೆ ಆಸ್ತಿಪಾಸ್ತಿ ನಷ್ಟ ಪ್ರಕರಣಗಳಲ್ಲಿ ನೀಡುತ್ತಿರುವ ಪರಿಹಾರ ಧನ ಮತ್ತು ಮಾಸಾಶನ ಧನವನ್ನು ಸರ್ಕಾರದ ಆದೇಶ ಸಂಖ್ಯೆ: ಅಪಜೀ 114 ಎಫ್.ಡಬ್ಲ್ಯು.ಎಲ್ 2022, ಬೆಂಗಳೂರು ದಿನಾಂಕ:15-12-2022ರಲ್ಲಿ ದುಪ್ಪಟ್ಟು ಮಾಡಿ ಪರಿಷ್ಕರಿಸಿ ಆದೇಶಿಸಲಾಗಿದೆ.<br>19. ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಬೆಳೆನಾಶ ಪ್ರಕರಣಗಳಿಗೆ ಸಂಬಂಧಿಸಿದಂತೆ ವಿವಿಧ ಬೆಳೆಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಅಪಜೀ 130 |

| | | |
|---|---|---|
| | | ಎಫ್.ಡಬ್ಲ್ಯು.ಎಲ್. 2016 ದಿನಾಂಕ:19.09.2016 ರಲ್ಲಿ ನಿಗಧಿಪಡಿಸಿರುವ ಪರಿಹಾರ ಮೊತ್ತವನ್ನು ಪ್ರಸ್ತುತ ದಿನಾಂಕ:18.01.2023 ರ ಆದೇಶದಲ್ಲಿ ದುಪ್ಪಟ್ಟು ಮಾಡಿ ಆದೇಶಿಸಲಾಗಿದೆ.<br>20. ಸರ್ಕಾರದ ಆದೇಶ ಸಂಖ್ಯೆ: ಅಪಜೀ 171 ಎಫ್.ಡಬ್ಲ್ಯು.ಎಲ್. 2022 ದಿನಾಂಕ: 16.02.2023 ರಲ್ಲಿ ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಸಾಕು ಪ್ರಾಣಿಗಳ ಪ್ರಾಣ ಹಾನಿ ಪ್ರಕರಣಗಳಿಗೆ ರಾಜ್ಯ ವಿಪತ್ತು ನಿರ್ವಹಣಾ ನಿಧಿ (SDRF) ರಲ್ಲಿನ ಚಾಲ್ತಿಯಲ್ಲಿರುವ ಪರಿಷ್ಕೃತ ದರಗಳಂತೆ ಪಾವತಿಸಲು ಆದೇಶಿಸಲಾಗಿದೆ. |

**ಸಂಖ್ಯೆ: ಅಪಜೀ 29 ಎಫ್‌ಡಬ್ಲ್ಯೂಎಲ್ 2024**

**(ಈಶ್ವರ ಬಿ. ಖಂಡ್ರೆ)**
**ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು**